Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

25.07.2025 18.40 hrs

<><*<><>*><>

## ಮುಖ್ಯಾಂಶಗಳು

- ಮಹದಾಯಿ ಯೋಜನೆ ; ಕೇಂದ್ರ ಸರ್ಕಾರದ ಮಧ್ಯಸ್ಥಿಕೆಗೆ ರಾಜ್ಯದ ಒತ್ತಾಯ
- ರಾಜ್ಯದ ೨೦೯ಕ್ಕೂ ಅಧಿಕ ಕೈಗಾರಿಕಾ ಪ್ರದೇಶಗಳಿಗೆ ವಿಶ್ವದರ್ಜೆಯ ಮೂಲಸೌಕರ್ಯ ; ಕೈಗಾರಿಕಾ ಸಚಿವ
- ಭಾರತ-ಇಂಗ್ಲೆಂಡ್ ನಡುವಿನ ಮುಕ್ತ ವ್ಯಾಪಾರ ಒಪ್ಪಂದ ; ಚನ್ನಪಟ್ಟಣದ ಗೊಂಬೆಗಳಿಗೆ ಜಾಗತಿಕ ಮಟ್ಟದ ಬೇಡಿಕೆ
- ರಾಜ್ಯದ ಎಲ್ಲಾ ತಾಲೂಕು ಕಚೇರಿಗಳಲ್ಲಿ ಭೂಮಾಲೀಕರ ಮೂಲ ದಾಖಲೆ ಸಂರಕ್ಷಣೆ ; ರಾಜ್ಯ ಸರ್ಕಾರದ ಕ್ರಮ

<><*<><>*><>

ಮಹದಾಯಿ ಕುಡಿಯುವ ನೀರಿನ ಯೋಜನೆ ಕುರಿತು ಕೇಂದ್ರ ಸರ್ಕಾರ ಮಧ್ಯಸ್ಥಿಕೆ ವಹಿಸಬೇಕು ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಒತ್ತಾಯಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೨೦೨೨ರಲ್ಲಿ ಕೇಂದ್ರ ಸರ್ಕಾರ ಈ ಯೋಜನೆಗೆ ಅನುಮತಿ ನೀಡಿತ್ತು. ತದನಂತರ ಗೋವಾದ ವಿರೋಧದಿಂದಾಗಿ ಕುಡಿಯುವ ನೀರಿನ ಯೋಜನೆಗೆ ಅಡ್ಡಿಯುಂಟಾಗಿದೆ ಎಂದರು. ಬೆಂಗಳೂರಿಗೆ ೪೭ ಟಿಎಂಸಿ ನೀರು ಒದಗಿಸುವ ಮೇಕೆದಾಟು ಯೋಜನೆಗೆ ಕೇಂದ್ರ ಸರ್ಕಾರ ಅನುಮತಿ ನೀಡಬೇಕು. ಈ ಸಂಬಂಧ ಸರ್ವಪಕ್ಷಗಳ ಸಭೆ ಕರೆಯುವ ಬಗ್ಗೆ ಮುಖ್ಯಮಂತ್ರಿ, ನೀರಾವರಿ ಸಚಿವರು ತೀರ್ಮಾನ ಕೈಗೊಳ್ಳಲಿದ್ದಾರೆ ಎಂದು ಹೇಳಿದರು.

<><*<><>*><>

ರಾಜ್ಯ ಸರ್ಕಾರದ ವಿನೂತನ ಯೋಜನೆಗಳ ಪರಿಣಾಮ ಕೈಗಾರಿಕಾ ಪ್ರಗತಿಯತ್ತ ರಾಜ್ಯ ದಾಪುಗಾಲು ಇಡುತ್ತಿದೆ ಎಂದು ಮಧ್ಯಮ ಮತ್ತು ಭಾರೀ ಕೈಗಾರಿಕೆ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಸಚಿವರು, 'ಇನ್ವೆಸ್ಟ್ ಕರ್ನಾಟಕ' ಸಮಾವೇಶ ಹಾಗೂ ಹೂಡಿಕೆ ಪ್ರವಾಸಗಳ ಮೂಲಕ ಜಾಗತಿಕ ಮಟ್ಟದ ಬಂಡವಾಳ ರಾಜ್ಯಕ್ಕೆ ಹರಿದು ಬರುತ್ತಿದೆ. ವೇಗದ ಅನುಮೋದನೆ, ಸಂವಾದ ವೇದಿಕೆಗಳು, ಕೈಗಾರಿಕಾ ಬೆಳವಣಿಗೆಗೆ ಸ್ಪಷ್ಟ ದಿಕ್ಕು ನೀಡುತ್ತಿವೆ. 'ಬಿಯಾಂಡ್ ಬೆಂಗಳೂರು' ಪರಿಕಲ್ಪನೆ ಮೂಲಕ ನಾಡಿನ ಎಲ್ಲ ಕಡೆ ಕೈಗಾರಿಕಾ ನೆಲೆಗಳನ್ನು ನಿರ್ಮಿಸಲಾಗುತ್ತಿದೆ ಎಂದು ಹೇಳಿದ್ದಾರೆ. ರಾಜ್ಯದ ೨೦೯ಕ್ಕೂ ಅಧಿಕ ಕೈಗಾರಿಕಾ ಪ್ರದೇಶಗಳಿಗೆ ವಿಶ್ವದರ್ಜೆಯ ಮೂಲಸೌಕರ್ಯ ಒದಗಿಸಲಾಗುತ್ತಿದೆ. ಕೈಗಾರಿಕಾ ಪ್ರದೇಶಗಳಿಗೆ ನೀರು ಸರಬರಾಜು ಖಾತರಿಗೆ ೩ ಸಾವಿರದ ೬೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಸಮಗ್ರ ಯೋಜನೆ ರೂಪಿಸಲಾಗಿದೆ ಸಚಿವರು ಮಾಹಿತಿ ನೀಡಿದ್ದಾರೆ. ಬೆಳಗಾವಿಯಲ್ಲಿನ ೨೫೦ ಎಕರೆಗೂ ಅಧಿಕ ಪ್ರದೇಶದಲ್ಲಿರುವ ವಿಶೇಷ ಆರ್ಥಿಕ ವಲಯ ಉತ್ತರ ಕರ್ನಾಟಕದ ಕೈಗಾರಿಕಾ ಭವಿಷ್ಯವನ್ನು ಬದಲಾಯಿಸುತ್ತಿದೆ. ರಾಜ್ಯವನ್ನು ಜಾಗತಿಕ ಉತ್ಪಾದಕ ಹಬ್ ಆಗಿಸುವ ಗುರಿ ಯತ್ತ ಸರ್ಕಾರದ ಹೆಜ್ಜೆಗಳು ಸದೃಢವಾಗಿವೆ ಎಂದು ಸಚಿವರು ತಿಳಿಸಿದ್ದಾರೆ.

<><*<><>*><>

ಭಾರತ-ಇಂಗ್ಲೆಂಡ್ ನಡುವಿನ ಮುಕ್ತ ವ್ಯಾಪಾರ ಒಪ್ಪಂದವು ಭಾರತದ ಆರ್ಥಿಕ ರಾಜತಾಂತ್ರಿಕತೆಯಲ್ಲಿ ಹೊಸ ಅಧ್ಯಾಯಕ್ಕೆ ನಾಂದಿ ಹಾಡಿದೆ ಎಂದು ಕೇಂದ್ರ ಉಕ್ಕು ಮತ್ತು ಭಾರೀ ಕೈಗಾರಿಕೆ ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಸುಂಕ ರಹಿತ ವ್ಯಾಪಾರ ಪ್ರವೇಶದೊಂದಿಗೆ ಸಾಂಪ್ರದಾಯಿಕ ಭಾರತೀಯ ರಫ್ತುಗಳು, ವಿಶೇಷವಾಗಿ ಕರ್ನಾಟಕದ ವಿಶ್ವಪ್ರಸಿದ್ಧ ಚನ್ನಪಟ್ಟಣ ಗೊಂಬೆಗಳಿಗೆ ಜಾಗತಿಕ ಮಟ್ಟದ ಬೇಡಿಕೆ ಹೆಚ್ಚಾಗಲಿದೆ ಎಂದು ತಿಳಿಸಿದ್ದಾರೆ. ಚನ್ನಪಟ್ಟಣ ಈಗ ಇಂಗ್ಲೆಂಡ್ ಮಾರುಕಟ್ಟೆಗೆ ನೇರ ಪ್ರವೇಶ ಹೊಂದಿದಂತೆ ಆಗಿದ್ದು, ನಮ್ಮ ಪಾರಂಪರಿಕ ಕಲಾವೈಭವಕ್ಕೆ ಆರ್ಥಿಕ ಸಬಲೀಕರಣದ ಸಂರಕ್ಷಣೆಯನ್ನು ಖಚಿತಪಡಿಸಿದೆ ಎಂದು ಹೇಳಿದ್ದಾರೆ. ಕುಶಲಕರ್ಮಿಗಳ ಜೀವನೋಪಾಯ ಬಲಪಡಿಸಲು ಮತ್ತು ಭಾರತದ ಜಾಗತಿಕ ವ್ಯಾಪಾರದ ಹೆಜ್ಜೆಗುರುತನ್ನು ವಿಸ್ತರಿಸುವ ಈ ದೂರದೃಷ್ಟಿಯ ಹೆಜ್ಜೆಗಾಗಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಕೃತಜ್ಞತೆ ಸಲ್ಲಿಸಿದ್ದಾರೆ.

<><*<><>*><>

ಧಾರವಾಡ ಜಿಲ್ಲೆಯ ನಿಗದಿ ಗ್ರಾಮದಲ್ಲಿ ಲೀಡ್ ಬ್ಯಾಂಕ್‌ನ ಪ್ರಾಯೋಜಕತ್ವದಲ್ಲಿ ಕೇಂದ್ರ ಸರ್ಕಾರದ ಸಾಮಾಜಿಕ ಭದ್ರತಾ ಯೋಜನೆಗಳ ಕುರಿತು ಜನರಲ್ಲಿ ಅರಿವು ಮೂಡಿಸಲಾಯಿತು. ಪ್ರಧಾನ ಮಂತ್ರಿ ಸುರಕ್ಷಾ ವಿಮಾ ಯೋಜನೆ, ಪ್ರಧಾನ ಮಂತ್ರಿ ಜೀವನ ಜ್ಯೋತಿ ವಿಮಾ ಯೋಜನೆ ಹಾಗೂ ಅಟಲ್ ಪೆನ್ಷನ್ ಯೋಜನೆಯ ಪ್ರಯೋಜನದ ಬಗ್ಗೆ ಗ್ರಾಮೀಣ ಜನರಿಗೆ ಮಾಹಿತಿ ನೀಡಲಾಯಿತು. ಕರ್ನಾಟಕ ವಿಕಾಸ ಗ್ರಾಮೀಣ ಬ್ಯಾಂಕಿನ ವ್ಯವಸ್ಥಾಪಕ ಹರೀಶ್ ಭಜಂತ್ರಿ ಮಾತನಾಡಿ, ಕೇಂದ್ರ ಸರ್ಕಾರ ಹಲವು ಜನಪರ ಯೋಜನೆಗಳನ್ನು ಜಾರಿಗೊಳಿಸಿದ್ದು, ರೈತರು ಇದರ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು. ಫಲಾನುಭವಿ ಮಮತಾ ಆಕಾಶವಾಣಿಯೊಂದಿಗೆ ತಮ್ಮ ಅನುಭವ ಹಂಚಿಕೊಂಡರು.

<><*<><>*><>

ಸಹಕಾರ ಬ್ಯಾಂಕ್‌ಗಳಲ್ಲಿ ಶೇಕಡ ೩ ರಂತೆ ೨ ಲಕ್ಷ ರೂಪಾಯಿವರೆಗೆ ರೈತರಿಗೆ ಸಾಲ ಸೌಲಭ್ಯ ನೀಡಲು ವ್ಯವಸ್ಥೆ ಮಾಡಲಾಗುತ್ತಿದೆ ಎಂದು ಬೆಂಗಳೂರು ಹಾಲು ಒಕ್ಕೂಟದ ಅಧ್ಯಕ್ಷ ಡಿ.ಕೆ.ಸುರೇಶ್ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆ ದೊಡ್ಡಬಳ್ಳಾಪುರದ ಬಮೂಲ್ ಶಿಬಿರದಲ್ಲಿ ಮಾತನಾಡಿದ ಅವರು, ಗ್ರಾಹಕರ ಹಿತವನ್ನು ಗಮನದಲ್ಲಿಟ್ಟುಕೊಂಡು ಗುಣಮಟ್ಟದ ಹಾಲು ಉತ್ಪಾದನೆಗೆ ಹೆಚ್ಚು ಒತ್ತು ನೀಡಲಾಗುತ್ತಿದೆ. ಹಾಲಿನ ಪ್ಯಾಕ್‌ಗಳಿಗೆ ಪ್ಲಾಸ್ಟಿಕ್ ಬದಲಿಗೆ ಪರಿಸರ ಸ್ನೇಹಿ ವಸ್ತುಗಳ ಬಳಕೆಗೆ ಕ್ರಮ ಕೈಗೊಳ್ಳಲಾಗಿದೆ ಎಂದು ಅವರು ತಿಳಿಸಿದರು. ಹಾಲು ಉತ್ಪಾದಕರ ಸಮಸ್ಯೆಗಳನ್ನು ಬಗೆಹರಿಸಲು ಸಮಾಲೋಚನಾ ಸಭೆಗಳನ್ನು ನಡೆಸಲಾಗುತ್ತಿದ್ದು, ರೈತರಿಗೆ ಹಾಲಿನ ದರ ಹೆಚ್ಚಳ, ಪಶು ಆಹಾರ ಬೆಲೆ ಇಳಿಕೆ ಮೊದಲಾದ ಸಮಸ್ಯೆಗಳನ್ನು ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಹೇಳಿದರು.

<><*<><>*><>

ರಾಜ್ಯದ ಎಲ್ಲಾ ತಾಲೂಕು ಕಚೇರಿಗಳಲ್ಲಿ ಭೂಮಾಲೀಕರ ಮೂಲ ದಾಖಲೆಗಳನ್ನು ಡಿಜಲೀಕರಣಗೊಳಿಸಿ ಸಂರಕ್ಷಿಸಲು ಸರ್ಕಾರ ಮುಂದಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ. ಮಡಿಕೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭೂದಾಖಲೆಗಳು ಕಳೆದು ಹೋಗದಂತೆ ತಡೆಯುವುದು ಇದರ ಪ್ರಮುಖ ಉದ್ದೇಶವಾಗಿದೆ. ಗೊಂದಲಗಳಿಗೆ ಆಸ್ಪದ ಆಗದಂತೆ ಭೂ ಮಾಲೀಕರಿಗೆ ದಾಖಲೆಯ ‘ಗ್ಯಾರಂಟಿ’ ನೀಡುವುದು ಭೂ ಸುರಕ್ಷತಾ ಯೋಜನೆಯ

ಉದ್ದೇಶವಾಗಿದೆ ಎಂದು ಹೇಳಿದರು. ಭೂ ದಾಖಲೆಗಳಿಗೆ ಸಂಬಂಧಿಸಿದಂತೆ ರಾಜ್ಯದಲ್ಲಿ ೧೦೦ ಕೋಟಿಗೂ ಹೆಚ್ಚು ಪುಟಗಳನ್ನು ಸ್ಕ್ಯಾನ್ ಮಾಡಲು ಉದ್ದೇಶಿಸಲಾಗಿದೆ. ಆ ನಿಟ್ಟಿನಲ್ಲಿ ಈಗಾಗಲೇ ಮೂವತ್ತಮೂರುವರೆ ಕೋಟಿ ಪುಟಗಳನ್ನು ಸ್ಕ್ಯಾನ್ ಮಾಡಲಾಗಿದೆ ಎಂದು ತಿಳಿಸಿದರು. ಭೂಮಾಲೀಕರು ಭೂಸುರಕ್ಷಾ ಯೋಜನೆಯಡಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಹತ್ತಿರದ ನಾಡಕಚೇರಿಗೆ ಹೋಗಿ ಅಲ್ಲಿಯೂ ಸಹ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಇದೊಂದು ಗ್ಯಾರಂಟಿ ನೀಡುವ ಯೋಜನೆಯಾಗಿದೆ ಎಂದು ಅವರು ಹೇಳಿದರು.

<><*<><>*><>

ಬೆಂಗಳೂರು ನಗರದ ಎಲ್ಲಾ ಉದ್ಯಾನವನಗಳಲ್ಲಿ ಎಲೆ ಗೊಬ್ಬರ ತಯಾರಿಕಾ ಘಟಕಗಳನ್ನು ನಿರ್ಮಿಸಲು ಬಿಬಿಎಂಪಿ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ದಕ್ಷಿಣ ವಲಯ ವ್ಯಾಪ್ತಿಯಲ್ಲಿ “ಮುಖ್ಯ ಆಯುಕ್ತರ ನಡೆ ವಲಯದ ಕಡೆ” ಕಾರ್ಯಕ್ರಮದ ಅಂಗವಾಗಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿ ಮಾತನಾಡಿದ ಅವರು, ಉದ್ಯಾನವನಗಳಲ್ಲಿ ಉತ್ಪತ್ತಿಯಾಗುವ ತ್ಯಾಜ್ಯವನ್ನು ಮೂಲದಲ್ಲಿಯೇ ಸಂಸ್ಕರಿಸಿ ಗೊಬ್ಬರ ತಯಾರಿಕೆಗೆ ಕ್ರಮ ಕೈಗೊಳ್ಳುವಂತೆ ಹೇಳಿದರು. ವಲಯಕ್ಕೊಂದು ಮರದ ಕೊಂಬೆಗಳನ್ನು ಪುಡಿ ಮಾಡುವ ಶೆಡ್ಡರ್ ಯಂತ್ರಗಳನ್ನು ಅಳವಡಿಸಲು ಸೂಚಿಸಿದರು. ಚಿಕ್ಕಪೇಟೆಯ ಗಾಂಧಿ ಬಜಾರ್‌ನಲ್ಲಿ ನಿರ್ಮಿಸಿರುವ ಬಹು ಹಂತದ ಕಾರು ನಿಲುಗಡೆ ಕಾಮಗಾರಿ ಪೂರ್ಣಗೊಂಡಿದ್ದು, ಅದನ್ನು ಶೀಘ್ರದಲ್ಲಿಯೇ ಸಾರ್ವಜನಿಕ ಸೇವೆಗೆ ಒದಗಿಸಲು ಅಧಿಕಾರಿಗಳಿಗೆ ಸೂಚಿಸಿದರು.

<><*<><>*><>

ಕೇಂದ್ರ ಸರ್ಕಾರದ ’ಪ್ರಧಾನಮಂತ್ರಿ ಪೋಷಣ್ ಶಕ್ತಿ ನಿರ್ಮಾಣ್’ ಯೋಜನೆ ಕೋಲಾರ ಜಿಲ್ಲೆಯಲ್ಲಿ ಯಾಸ್ವಿಯಾಗಿ ಅನುಷ್ಠಾನಗೊಂಡಿದೆ. ಸರ್ಕಾರ ಮತ್ತು ಸರ್ಕಾರಿ ಅನುದಾನಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳು ಬಿಸಿಯೂಟ ಯೋಜನೆಯ ಸದುಪಯೋಗ ಪಡೆದುಕೊಳ್ಳುತ್ತಿದ್ದಾರೆ. ಕೋಲಾರ ನಗರದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಒಂದರಿಂದ ಏಳನೇ ತರಗತಿಯವರೆಗೆ ಸುಮಾರು ೨೫೫ ಮಕ್ಕಳಿದ್ದು ಎಲ್ಲರಿಗೂ ವಾರದಲ್ಲಿ ಎರಡು ದಿನ ಚಿಕ್ಕಿ, ಮೊಟ್ಟೆ, ಬಾಳೆಹಣ್ಣು ವಿತರಿಸಲಾಗುತ್ತಿದೆ ಹಾಗೂ ವಾರಕ್ಕೆ ಮೂರು ದಿನ ಹಾಲು, ರಾಗಿ ಮಾಲ್ಟ್ ವಿತರಿಸಲಾಗುತ್ತಿದೆ.

<><*<><>*><>

ಗ್ರಾಮಪಂಚಾಯಿತಿ ಅಧಿಕಾರಿಗಳು ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಬೇಕು ಎಂದು ಉಪ ಲೋಕಾಯುಕ್ತ ಬಿ. ವೀರಪ್ಪ ಸೂಚಿಸಿದ್ದಾರೆ. ಕೋಲಾರ ಜಿಲ್ಲೆಯ ಶ್ರೀನಿವಾಸಪುರದಲ್ಲಿಂದು ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿ ಮಾತನಾಡಿದ ಅವರು, ಕಾಮಗಾರಿಗಳಲ್ಲಿ ಗುಣಮಟ್ಟ, ಗ್ರಾಮಗಳಲ್ಲಿ ಸ್ವಚ್ಛತೆ, ನೈರ್ಮಲ್ಯಕ್ಕೆ ಆದ್ಯತೆ ನೀಡಿ ಸಮರ್ಪಕವಾಗಿ ಜವಾಬ್ದಾರಿಯನ್ನು ನಿರ್ವಹಿಸಬೇಕು ಎಂದರು. ಜಿಲ್ಲಾಧಿಕಾರಿ ಎಂ.ಆರ್. ರವಿ ಮಾತನಾಡಿ, ಅಧಿಕಾರಿಗಳು ಸಾರ್ವಜನಿಕರ ಸಮಸ್ಯೆಗಳನ್ನು ಪರಿಹರಿಸುವುದರಲ್ಲಿ ನಿರ್ಲಕ್ಷ್ಯ ತೋರಿಸಬಾರದು ಎಂದು ಸೂಚಿಸಿದರು.

<><*<><>*><>

ಸರ್ಕಾರಿ ಶಾಲೆಗಳಲ್ಲಿ ಉತ್ತಮ ಸೌಲಭ್ಯಗಳು ದೊರೆಯುತ್ತಿದ್ದು, ಪೋಷಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ದಾಖಲಿಸಬೇಕು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಎ.ಬಿ.ಬಸವರಾಜು ಹೇಳಿದ್ದಾರೆ. ದೊಡ್ಡಬಳ್ಳಾಪುರ ತಾಲೂಕಿನ ಹಿರೇಮುದ್ದೇನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ

ಶಾಲೆಯಲ್ಲಿ ಆಯೋಜಿಸಿದ್ದ "ಸರ್ಕಾರಿ ಶಾಲೆ ಉಳಿಸಿ - ಕನ್ನಡ ಬೆಳೆಸಿ" ಅಭಿಯಾನಕ್ಕೆ ಚಾಲನೆ ಮಾತನಾಡಿದ ಅವರು, ಸರ್ಕಾರಿ ಶಾಲೆಗಳಲ್ಲಿ ಇಂದು ಅಗತ್ಯ ಮೂಲಸೌಕರ್ಯಗಳು ಲಭ್ಯವಿದ್ದು, ಅವುಗಳನ್ನು ಸಮರ್ಪಕವಾಗಿ ಬಳಸಿಕೊಂಡು ಶಿಕ್ಷಣ ಪಡೆದರೆ ಉತ್ತಮ ಫಲಿತಾಂಶ ಸಿಗಲಿದೆ ಎಂದರು.

<><*<><>*><>

ಚಿಕ್ಕಬಳ್ಳಾಪುರ ನಗರದಲ್ಲಿನ ಸಂಚಾರ ದಟ್ಟಣೆ ಕಡಿಮೆ ಮಾಡಿ ಅಭಿವೃದ್ಧಿ ಮಾಡುವ ಎರಡು ಪ್ರಮುಖ ರಸ್ತೆಗಳನ್ನು ೮ ಕೋಟಿ ರೂಪಾಯಿ ವೆಚ್ಚದಲ್ಲಿ ಅಗಲೀಕರಣ ಮಾಡಲಾಗುವುದು ಎಂದು ಶಾಸಕ ಪ್ರದೀಪ್ ಈಶ್ವರ್ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿ ಅವರು, ಹೈ ಕೋರ್ಟ್ ನಿರ್ದೇಶನದಂತೆ ರಸ್ತೆ ಅಗಲೀಕರಣಕ್ಕೆ ನಗರಸಭೆ ಪೌರಾಯುಕ್ತರಿಗೆ ಸೂಚಿಸಲಾಗಿದೆ. ಮಳಿಗೆಗಳ ವರ್ತಕರು ಅಭಿವೃದ್ಧಿ ಕಾರ್ಯಕ್ಕೆ ಸಹಕರಿಸಬೇಕು. ಇನ್ನು ಆರು ತಿಂಗಳೊಳಗೆ ಅಗಲೀಕರಣ ಕಾರ್ಯ ಮುಕ್ತಾಯಗೊಳ್ಳಲಿದೆ ಎಂದರು. ವರ್ತಕರು ಮಾಡಿಕೊಂಡಿರುವ ಒತ್ತುವರಿಯನ್ನು ಸ್ವಯಂ ಪ್ರೇರಿತರಾಗಿ ತೆರವು ಮಾಡಬೇಕು ಎಂದು ತಿಳಿಸಿದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>